ಅ) ಜಿಲ್ಲೆಯಲ್ಲಿ ಒಟ್ಟು ಎಷ್ಟು ಗ್ರಾಮಗಳಿಗೆ ಇನ್ನೂ ಬಸ್ಸಿನ ಸೌಕರ್ಯವಿಲ್ಲ ಅವುಗಳಿಗೆ ಎಂದು ಒದಗಿಸಲಾಗುವುದು ?

ಶ್ರೀ ಕೆ. ಜೆ. ಜಾರ್ಜ್ (ಸಾರಿಗೆ ಸಚಿವರು).—

ಅ) ಬೀದರ್ ಜಿಲ್ಲೆಯಲ್ಲಿರುವ ಬಸ್ಸು ಘಟಕಗಳು ಮತ್ತು ಇವುಗಳು ಹೊಂದಿರುವ ವಾಹನಗಳು ಈ ಕೆಳಕಂಡಂತಿವೆ. (೨೨-೬-೯೦ ರಲ್ಲಿ ಇದ್ದಂತೆ)

ಘಟಕಗಳ ಹೆಸರು	ಒಟ್ಟು ವಾಹನ ಬಲ	ಕಾರ್ಯಾಚರಣೆಯಲ್ಲಿರುವ ಅನುಸೂಚಿಗಳು
ಬೀದರ್	೭೪	೬೮
ಹುಮ್ನಾಬಾದ್	೮೯	೭೮
ಬಸವಕಲ್ಯಾಣ	೬೨	೫೪

ಆ) ೨೦ ಗ್ರಾಮಗಳಿಗೆ ಬಸ್ಸು ಸೌಕರ್ಯವನ್ನು ಒದಗಿಸಲಾಗಿಲ್ಲ. ವಾಹನ ಯೋಗ್ಯ ಮಾರ್ಗ ಗಳಾದ ನಂತರ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯು ಈ ಗ್ರಾಮಗಳಿಗೆ ಸಾರಿಗೆ ಸೌಲಭ್ಯವನ್ನು ವಿಸ್ತರಿಸುವುದು.

ಬೀದರ್ ಜಿಲ್ಲೆಯಲ್ಲಿ ರಸ್ತೆ ಸಾರಿಗೆ ಸಂಸ್ಥೆಯನ್ನು ತೆರೆಯುವ ಬಗ್ಗೆ

೯೮೨ (೧೩೨೦ ಬಿ) ಶ್ರೀ ಬಸವರಾಜ ಪಾಟೀಲ್ ಅಟ್ಟೂರ್ (ಬಸವಕಲ್ಯಾಣ).—ಮಾನ್ಯ ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ:—

ಅ) ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ ವಿಭಾಗವನ್ನು ಬೀದರ್ ಜಿಲ್ಲೆಯಲ್ಲಿ ತೆರೆಯುವ ಪ್ರಸ್ತಾವವೇನಾದರೂ ಇದೆಯೇ ?

ಆ) ಹಾಗಿದ್ದಲ್ಲಿ ಯಾವಾಗ ಕಾರ್ಯಗತ ಮಾಡಲಾಗುವುದು ?

ಶ್ರೀ ಕೆ. ಜೆ. ಜಾರ್ಜ್ (ಸಾರಿಗೆ ಸಚಿವರು).—

ಅ) ಅಂತಿಮ ತೀರ್ಮಾನವನ್ನು ಇನ್ನೂ ತೆಗೆದುಕೊಂಡಿಲ್ಲ.

ಆ) ಉದ್ಭವಿಸುವುದಿಲ್ಲ.

ಬಸವಕಲ್ಯಾಣ ಪಟ್ಟಣವನ್ನು ಪ್ರವಾಸಿ ಕೇಂದ್ರವನ್ನಾಗಿ ಪರಿಗಣಿಸುವುದು

೯೮೩ (೧೨೯೦) ಶ್ರೀ ಬಸವರಾಜ ಪಾಟೀಲ್ ಅಟ್ಟೂರ್ (ಬಸವಕಲ್ಯಾಣ).—ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಪ್ರವಾಸೋದ್ಯಮ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ:—

ಅ) ಬಸವ ಕಲ್ಯಾಣ ಪಟ್ಟಣ ಪ್ರವಾಸಿ ಕೇಂದ್ರವನ್ನಾಗಿ ಪರಿಗಣಿಸಲಾಗಿದೆಯೆ ?

ಆ) ಹಾಗಿಲ್ಲದಿದ್ದಲ್ಲಿ, ಬಸವಕಲ್ಯಾಣವನ್ನು ಪ್ರವಾಸಿ ಕೇಂದ್ರವನ್ನಾಗಿ ಪರಿಗಣಿಸಲು ಸರ್ಕಾರದಲ್ಲಿ ಯೋಜನೆಯನ್ನೇನಾದರೂ ರೂಪಿಸಲಾಗಿದೆಯೆ ?

ಇ) ಹಾಗಿದ್ದಲ್ಲಿ ಪ್ರವಾಸಿ ಕೇಂದ್ರವನ್ನಾಗಿ ಘೋಷಿಸಲು ಕ್ರಮ ಯಾವಾಗ ಕೈಕೊಳ್ಳಲಾಗುವುದು ?

ಶ್ರೀ ಎಂ. ವೀರಪ್ಪ ಮೊಯಿಲಿ (ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಪ್ರವಾಸೋದ್ಯಮ ಸಚಿವರು).—

ಅ) ಹೌದು.

ಆ) ಉದ್ಭವಿಸುವುದಿಲ್ಲ.

ಇ) ಉದ್ಭವಿಸುವುದಿಲ್ಲ.